**Newspaper clipping: 5 Days Online Faculty Development Programme sponsored by ATAL/AICTE on “Sustainability Engineering”**

**Publication: Prajavani**
**Date : 03-01-2021**

# ಬೆಂಗಳೂರು ನಗರ



## ‘ಎಂಜಿನಿಯರ್ ಸುಸ್ಥಿರತೆ’ ನಾಳೆಯಿಂದ ಕಾರ್ಯಾಗಾರ

ಬೆಂಗಳೂರು: ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯದ ಸಿವಿಲ್ ಎಂಜಿನಿಯರಿಂಗ್ ವಿಭಾಗವು ‘ಎಂಜಿನಿಯರಿಂಗ್ ಸುಸ್ಥಿರತೆ’ ಕುರಿತು ಇದೇ 4ರಿಂದ 8ರವರೆಗೆ ರಾಷ್ಟ್ರೀಯ ಕಾರ್ಯಾಗಾರವನ್ನು ಆನ್‌ಲೈನ್‌ನಲ್ಲಿ ಹಮ್ಮಿಕೊಂಡಿದೆ.

ಜ.4ರಂದು ಬೆಳಿಗ್ಗೆ 9 ಗಂಟೆಗೆ ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲ ಸಂಜಯ್ ಜೈನ್ ಕಾರ್ಯಾಗಾರವನ್ನು ಉದ್ಘಾಟಿಸಲಿದ್ದಾರೆ.

ನಿರ್ಮಾಣ ನಿರ್ವಹಣೆಯಲ್ಲಿ ಸುಸ್ಥಿರತೆ ಸಾಧಿಸಲು ಅಗತ್ಯವಾದ ತಾಂತ್ರಿಕ ಜ್ಞಾನ ಮತ್ತು ಕೌಶಲಗಳ ಕುರಿತು ತರಬೇತಿ ನೀಡುವುದು ಕಾರ್ಯಾಗಾರದ ಉದ್ದೇಶ.

ಕಟ್ಟಡಗಳ ನಿರ್ಮಾಣ ನಿರ್ವಹಣೆಯಲ್ಲಿ ಸುಸ್ಥಿರತೆ, ಕಸ ನಿರ್ವಹಣೆ ಸೇರಿದಂತೆ ಹಲವು ವಿಷಯಗಳ ಕುರಿತು ಕೈಗಾರಿಕೆ ಹಾಗೂ ಶೈಕ್ಷಣಿಕ ಕ್ಷೇತ್ರದ ತಜ್ಞರು ಮಾತನಾಡಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಹೆಚ್ಚಿನ ಮಾಹಿತಿಗೆ ಮೊಬೈಲ್: 8095762015ಗೆ ಸಂಪರ್ಕಿಸಬಹುದು.